Online Newspaper Clipping Service
Dtd-Tuesday, 7th, July- 2020

THE TIMES OF INDIA

Page No.05

# UGC gives varsities window till Sept-end to hold final-year exams

Manash.Gohain@timesgroup.com

**New Delhi:** After a nod from the home ministry for higher education institutes to hold final year exams, the UGC on Monday decided to give them a window till September-end to conduct them while reiterating the earlier guidelines to assess the final semester (graduating) students through an examination conducted in either online, offline or blended mode.

**The UGC said there will be no changes to the guidelines issued on April 29. The calendar has been tweaked and institutions have been given time till September-end to hold the final year exams, it said. But the guidelines, issued on Monday said that in case a student of terminal semester/ final year is unable to appear in the examination for whatsoever reasons, he or she may be given an opportunity to appear in a special examination to be conducted as and when feasible.**

"The final term examinations are to be compulsorily conducted as per the UGC Guidelines on examinations and academic calendar for the universities; and as per the Standard Operating Procedure (SOP) approved by the ministry of health & family welfare," a home ministry statement said. In view of the surge in Covid-19 infections, UGC's panel of experts, headed by Haryana University vice-chancellor RC Kuhad, was on June 25 asked to review the final year examination guidelines issued on April 29.

HRD minister Ramesh Pokhriyal had said: "I have advised UGC to revisit the guidelines issued earlier f... The foundation for revisited guidelines shall be health and safety (of) students, teachers and staff."

The April 29 guidelines for assessment of final-year students had suggested universities to conduct examinations in offline or online mode, while it was recommended that first and second-year students be promoted on the basis of internal evaluation and performance in the previous semester/year. As per the earlier guidelines, the new academic session was scheduled to commence from September 1 and from August 1 for those already enrolled. The pending university exams are to be conducted in July.

ಕನ್ನಡಪ್ರಭ



# ವೈದ್ಯರಿಗೆ ರಿಸ್ಕ್ ಭತ್ಯೆ, ವೈದ್ಯ ವಿದ್ಯಾರ್ಥಿಗಳಿಗೆ ವಿಶೇಷ ಅಂಕ?

• **ಕನ್ನಡಪ್ರಭ ವಾರ್ತೆ** ಬೆಂಗಳೂರು



ಕೊರೋನಾ ಸೋಂಕು ನಿಯಂತ್ರಣದಲ್ಲಿ ಮುಂಚೂಣಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರಿಗೆ ರಿಸ್ಕ್ ಭತ್ಯೆ ಹಾಗೂ ಕೋವಿಡ್ ಚಿಕಿತ್ಸೆಯಲ್ಲಿ ಪಾಲ್ಗೊಳ್ಳುವ ನಗರದ ಅಂತಿಮ ಹಂತದ ವೈದ್ಯ ವಿದ್ಯಾರ್ಥಿಗಳಿಗೆ ನೀಟ್ ಪರೀಕ್ಷೆ ವೇಳೆ ಐದು ವಿಶೇಷ ಅಂಕ ನೀಡಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ. ಅದೇ ರೀತಿ ಆರೋಗ್ಯ ಇಲಾಖೆಯ 'ಡಿ' ದರ್ಜೆ ನೌಕರರಿಗೆ ವೇತನ ದುಪ್ಪಟ್ಟು ಮಾಡುವ ಆಲೋಚನೆಯೂ ಇದೆ. ಈ ಎಲ್ಲಾ ವಿಚಾರಗಳು ಇನ್ನು ಎರಡ್ಮೂರು ದಿನಗಳಲ್ಲಿ ಸ್ಪಷ್ಟಗೊಳ್ಳಲಿವೆ ಎಂದು ವೈದ್ಯ ಶಿಕ್ಷಣ ಸಚಿವ ಸುಧಾಕರ್ ತಿಳಿಸಿದ್ದಾರೆ. ವಿವರ ➘ 7

# 'ಕೊರೋನಾ ಯೋಧ'ರಿಗೆ ರಿಸ್ಕ್ ಭತ್ಯೆ

## ವೈದ್ಯ ವಿದ್ಯಾರ್ಥಿಗಳಿಗೆ 5 ವಿಶೇಷಾಂಕಕ್ಕೆ ಚಿಂತನೆ | ಡಿ–ದರ್ಜೆ ವೇತನ ದುಪ್ಪಟ್ಟು ಮಾಡಲು ಚಿಂತನೆ: ಸುಧಾಕರ್

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೊರೋನಾ ಸೋಂಕು ನಿಯಂತ್ರಣದಲ್ಲಿ ಮುಂಚೂಣಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯಕೀಯ ಯೋಧರಿಗೆ ರಿಸ್ಕ್ ಭತ್ಯೆ ಹಾಗೂ ಕೋವಿಡ್ ಚಿಕಿತ್ಸೆಯಲ್ಲಿ ಪಾಲ್ಗೊಳ್ಳುವ ನಗರದ ಅಂತಿಮ ಹಂತದ ವೈದ್ಯ ವಿದ್ಯಾರ್ಥಿಗಳಿಗೆ ನೀಟ್ ಪರೀಕ್ಷೆ ವೇಳೆ ಐದು ವಿಶೇಷ ಅಂಕ ನೀಡಲು ರಾಜ್ಯ ಸರ್ಕಾರ ಚಿಂತನೆ ನಡೆಸಿದೆ.



ಸೋಮವಾರ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕೋವಿಡ್-19 ತಡೆಗಟ್ಟುವುದಕ್ಕಾಗಿ ಎಲ್ಲಾ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದ ನಂತರ ವೈದ್ಯ ಶಿಕ್ಷಣ ಸಚಿವ ಡಾ. ಕೆ. ಸುಧಾಕರ್ ಈ ವಿಷಯ ತಿಳಿಸಿದರು.

ಕೋವಿಡ್ ನಿಯಂತ್ರಣ ವಿಚಾರದಲ್ಲಿ ಮುಂಚೂಣಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯಕೀಯ ಯೋಧರಿಗೆ ಹಾಗೂ ಎಲ್ಲಾ ಆರೋಗ್ಯ ಸಿಬ್ಬಂದಿಗೆ ರಿಸ್ಕ್ ಭತ್ಯೆ ನೀಡುವ ಚಿಂತನೆಯಿದೆ. ಅದೇ ರೀತಿ ಆರೋಗ್ಯ ಇಲಾಖೆಯ 'ಡಿ' ದರ್ಜೆ ನೌಕರರಿಗೆ ವೇತನ ದುಪ್ಪಟ್ಟು ಮಾಡುವ ಆಲೋಚನೆಯೂ ಇದೆ. ಈ ಎಲ್ಲಾ ವಿಚಾರಗಳು ಇನ್ನು ಎರಡ್ಮೂರು ದಿನಗಳಲ್ಲಿ ಸ್ಪಷ್ಟಗೊಳ್ಳಲಿವೆ ಎಂದರು.

ಆರೋಗ್ಯ ಯೋಧರಾಗಿ ಕೆಲಸ ಮಾಡುತ್ತಿರುವ ಎಲ್ಲರೂ ಸುಮಾರು 120 ದಿನಗಳಿಂದ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಅವರು ಮಾನಸಿಕವಾಗಿ ಹಾಗೂ ದೈಹಿಕವಾಗಿ ಕುಗ್ಗಿ ಹೋಗಿ ಅವರಿಗೆ ಸೋಂಕು ತಗಲುವ ಅಪಾಯ ಹೆಚ್ಚಾಗಿದ್ದು, ಅವರ ಆತ್ಮಸ್ಥೈರ್ಯ ಹೆಚ್ಚಿಸುವ ನಿಟ್ಟಿನಲ್ಲಿ ಈ ಹೆಚ್ಚುವರಿ ಭತ್ಯೆ ನೀಡಲು ಸರ್ಕಾರ ಚಿಂತನೆ ನಡೆಸುತ್ತಿದೆ ಎಂದು ತಿಳಿಸಿದರು.

ಕೋವಿಡ್ ನಿಯಂತ್ರಿಸಲು ಸರ್ಕಾರ ಮತ್ತಷ್ಟು ಕಠಿಣ ಕ್ರಮಕ್ಕೆಗೊಳ್ಳುತ್ತಿದೆ. ಪ್ರತಿ ದಿನ ಕೋವಿಡ್ ಪರೀಕ್ಷೆ ಹೆಚ್ಚಿಸುವ ಗುರಿ ಹೊಂದಲಾಗಿದ್ದು, ಕಳೆದ 24 ಗಂಟೆಗಳಲ್ಲಿ 15 ಸಾವಿರಕ್ಕೂ ಅಧಿಕ ಪರೀಕ್ಷೆ ನಡೆಸಲಗಿದೆ. ಕೋವಿಡ್ ಪರೀಕ್ಷೆ ನಿರ್ವಹಣೆಗೆಂದು ಹಿರಿಯ ನೋಡಲ್ ಅಧಿಕಾರಿಯನ್ನು ನೇಮಿಸಲಾಗಿದೆ ಎಂದು ಹೇಳಿದರು.

### ವೈದ್ಯ ವಿದ್ಯಾರ್ಥಿಗಳಿಗೆ ವಿಶೇಷ ಅಂಕ

**ಬೆಂ**ಗಳೂರಿನಲ್ಲಿ ಸ್ನಾತಕೋತ್ತರ ಪರೀಕ್ಷೆ ಬರೆಯುತ್ತಿರುವ ಸುಮಾರು ಎರಡು ಸಾವಿರ ವೈದ್ಯ ವಿದ್ಯಾರ್ಥಿಗಳನ್ನು ಕೋವಿಡ್ ಚಿಕಿತ್ಸೆಗೆ ಬಳಸಲಾಗುವುದು. ಅಲ್ಲದೇ ಅಂತಿಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ಎರಡು ಸಾವಿರ ನರ್ಸಿಂಗ್ ವಿದ್ಯಾರ್ಥಿಗಳು ಮತ್ತು ಎಂಬಿಬಿಎಸ್ ವಿದ್ಯಾರ್ಥಿಗಳನ್ನು ಕೋವಿಡ್ ಕೇರ್ ಸೆಂಟರ್‌ಗಳಲ್ಲಿ ಚಿಕಿತ್ಸೆ ನೀಡಲು ಬಳಸಲಾಗುವುದು. ಸೋಂಕಿತರ ಚಿಕಿತ್ಸೆಯಲ್ಲಿ ತೊಡಗುವ ಸ್ನಾತಕೋತ್ತರ ವೈದ್ಯ ವಿದ್ಯಾರ್ಥಿಗಳಿಗೆ ನೀಟ್ ಪರೀಕ್ಷೆಯಲ್ಲಿ ಐದು ವಿಶೇಷಾಂಕಗಳನ್ನು ನೀಡುವ ಕುರಿತು ಚರ್ಚೆ ನಡೆಸಲಾಗಿದ್ದು, ಶೀಘ್ರದಲ್ಲೇ ಈ ಬಗ್ಗೆ ತೀರ್ಮಾನಕ್ಕೆಗೊಳ್ಳುವುದಾಗಿ ತಿಳಿಸಿದರು. ಬೂತ್ ಮಟ್ಟದಲ್ಲಿ ಟಾಸ್ಕ್‌ಫೋರ್ಸ್ ರಚನೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದ್ದು, ಶೀಘ್ರದಲ್ಲೇ ಟಾಸ್ಕ್ ಫೋರ್ಸ್ ರಚನೆಯಾಗಲಿದೆ. ಗ್ರಾಮೀಣ ಪ್ರದೇಶದಲ್ಲಿ ಹಾಗೂ ನಗರಗಳಲ್ಲಿ ಕೋವಿಡ್ ನಿಯಂತ್ರಣಕ್ಕೆ ಇದು ಸಕ್ರಿಯವಾಗಿ ಕಾರ್ಯ ನಿರ್ವಹಿಸಲಿದೆ ಎಂದು ಹೇಳಿದರು.

ಕನ್ನಡಪ್ರಭ



# ಪಿಜಿಸಿಇಟಿ 2ನೇ ಸುತ್ತಿನ ಸೀಟ್ ಮ್ಯಾಟ್ರಿಕ್ಸ್ ಪ್ರಕಟ

ಬೆಂಗಳೂರು: ಕರ್ನಾಟಕ ಪರೀಕ್ಷಾ ಪ್ರಾಧಿಕಾರವು 2020ನೇ ಸಾಲಿನ ಪಿಜಿಸಿಇಟಿ ಎರಡನೇ ಸುತ್ತಿನ ಸೀಟ್ ಮ್ಯಾಟ್ರಿಕ್ಸ್ ಪ್ರಕಟಿಸಿದೆ. ಅಖಿಲ ಭಾರತ ಕೋಟಾದಡಿ ರಾಜ್ಯಕ್ಕೆ 188 ವೈದ್ಯ ಸೀಟುಗಳು ಲಭ್ಯವಾಗಿವೆ. ಮೊದಲನೇ ಸುತ್ತಿನಲ್ಲಿ ಹಂಚಿಕೆಯಾಗಿ ಉಳಿದಿರುವ, ರದ್ದುಗೊಂಡಿರುವ ಮತ್ತು ಹೊಸದಾಗಿ ಸೇರ್ಪಡೆಯಾಗಿರುವ ಸೀಟುಗಳನ್ನು ಹಂಚಿಕೆ ಮಾಡಲಾಗುತ್ತದೆ. ಈ ಸಂಬಂಧ ರಾಜ್ಯದ ವೈದ್ಯಕೀಯ ಶಿಕ್ಷಣ ನಿರ್ದೇಶಕರು ಜು.3 ರಂದು ಅಖಿಲ ಭಾರತ ಕೋಟಾದಲ್ಲಿ ರಾಜ್ಯಕ್ಕೆ ಹಂಚಿಕೆಯಾಗಿರುವ ಸ್ನಾತಕೋತ್ತರ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳಿಗೆ ಸೀಟು ಮ್ಯಾಟ್ರಿಕ್ಸ್ ನೀಡಿದ್ದಾರೆ. ಆ ಪ್ರಕಾರ, 188 ವೈದ್ಯ, 1 ಡಿಪ್ಲೊಮಾ ಮತ್ತು 2 ದಂತ ವೈದ್ಯಕೀಯ ಸೀಟುಗಳಿವೆ. ಜು.6ರ ಸಂಜೆ 6ರಿಂದ ಜು.9ರ ಬೆಳಗ್ಗೆ 11 ಗಂಟೆ ವರೆಗೆ ಅಭ್ಯರ್ಥಿಗಳು ಆಯ್ಕೆ ಮತ್ತು ಇಚ್ಛೆಗಳನ್ನು ದಾಖಲಿಸಬಹುದು. ಸೀಟ್ ಮ್ಯಾಟ್ರಿಕ್ಸ್ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟ್ **http://kea.kar.nic.in** ನಲ್ಲಿ ಪ್ರಕಟಿಸಲಾಗಿದೆ. ಭೇಟಿ ನೀಡಿ ಮಾಹಿತಿ ಪಡೆದುಕೊಳ್ಳಬಹುದು.